VIJAYAKUMAR KANNUR
Digitally signed by VIJAYAKUMAR KANNUR
Date: 2026.03.07 10:52:59 +0530



**ಪ್ರಧಾನ ಹಿರಿಯ ದಿವಾಣಿ ನ್ಯಾಯಧೀಶರು ಹಾಗೂ ಜೆ.ಎಂ.ಎಫ್.ಸಿ. ಇವರ ನ್ಯಾಯಾಲಯ, ಮುಧೋಳ**

**ಸಾಕ್ಷಿಗೆ ಇಂದು ದಿನಾಂಕ 06.03.2026 ರಂದು ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆ: ಪ್ರತಿವಾದಿ ಪರ ಶ್ರೀ ಆರ್ ಬಿ ಎ ವಕೀಲರಿಂದ**

ನಾನು ಪ್ರತಿವಾದಿ ನಂ. 3 ಇದ್ದು, ನನ್ನ ಮುಖ್ಯ ವಿಚಾರಣೆ ಪ್ರಮಾಣ ಪತ್ರವನ್ನು ಹಾಜರುಪಡಿಸಿದ್ದು, ಅದರ ವಿಚಾರಗಳನ್ನು ನಾನೇ ಹೇಳಿ ಬರೆಸಿದ್ದು, ಅದರಲ್ಲಿ ಬರೆದ ವಿಚಾರಗಳು ಸತ್ಯವಾಗಿರುತ್ತದೆ.

**ಪಾಟೀ ಸವಾಲುಃ ವಾದಿ ಪರ ಶ್ರೀ ಎಸ್ ಎಸ್ ಎನ್ ವಕೀಲರಿಂದ :**

ನನ್ನ ಸಾಕ್ಷಿಯ ಮುಖ್ಯ ವಿಚಾರಣೆಯ ಪ್ರಮಾಣ ಪತ್ರ ಬರೆಸಿ ಹಾಕಲು ವಕೀಲರಿಗೆ ನಾನೇ ಮಾಹಿತಿ ನೀಡಿರುವೆನು. ನಾನು ನನ್ನ ಹಾಗೂ ಪ್ರತಿವಾದಿ 1 ಮತ್ತು 2 ರವರ ಪರವಾಗಿ ಸಹ ಸಾಕ್ಷಿ ನುಡಿಯುತ್ತಿರುವೆನು. ವಾದಿಯು ನನಗೆ ಸಹೋದರಿಯಾಗಬೇಕು. ಪ್ರತಿವಾದಿ 1 ರವರು ನನ್ನ ತಾಯಿಯಾಗಬೇಕು, ಪ್ರತಿವಾದಿ 2 ರವರು ನನ್ನ ಸಹೋದರಿಯಾಗಬೇಕು, ಪ್ರತಿವಾದಿ 4 ರವರು ನನಗೆ ಅಣ್ಣನಾಗಬೇಕು. ನನ್ನ ತಂದೆಗೆ ನಾನು, ವಾದಿ ಹಾಗೂ ಉಳಿದ ಪ್ರತಿವಾದಿಯರನ್ನು ಹೊರತು ಪಡಿಸಿ ಬೇರೆ ಯಾರು ವಾರಸುದಾರರು ಇರುವುದಿಲ್ಲ ಎಂದರೆ ಸರಿ.

2. ದಾವಾ ಆಸ್ತಿಯಲ್ಲಿ ನನಗೂ, ವಾದಿ ಮತ್ತು ಉಳಿದ ಪ್ರತಿವಾದಿಯರಿಗೂ ಸಂಬಂಧಪಟ್ಟಿರುವುದು ಎಂದರೆ ಸರಿ. ದಾವಾ ಆಸ್ತಿ ಮೂಲತಃ ನನ್ನ ತಂದೆಯ ಆಸ್ತಿಯಾಗಿದ್ದು, ಆತ ಮೃತ ಪಟ್ಟ ನಂತರ ನಾವು ವಾರಸಾನಾತೆಯಿಂದ ಹಕ್ಕು ಬದಲಾವಣೆ ಮಾಡಿಕೊಂಡಿರುವೆವು. ವಾದಿಗೆ ದಾವಾ ಆಸ್ತಿಯಲ್ಲಿ 1/5 ಅಂಶ ಹಕ್ಕು ಇರುವುದು ಎಂದರೆ ಸರಿ.

**ಮರುವಿಚಾರಣೆಃ** ಇರುವುದಿಲ್ಲ

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಸಾಕ್ಷಿಯ ಹೇಳಿಕೆಯಂತೆ ಬೆರಳಚ್ಚು ಮಾಡಿಸಲಾಯಿತು. )

ಓ . ಹೇ. ಕೆ . ಸರಿ ಅದೆ .

ಸಾಕ್ಷಿಯ ಸಹಿ

ಪ್ರಧಾನ ಹಿರಿಯ ದಿವಾಣಿ ನ್ಯಾಯಾಧೀಶರು
ಜೆ.ಎಂ.ಎಫ್.ಸಿ., ಮುಧೋಳ